ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

14

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 20/1/2021

ಗೋರಕ್ಷಕರ ಮೇಲಿನ ಕೇಸ್ ವಾಪಸಿಗೆ ಚಿಂತನೆ

ಗೃಹ ಸಚಿವರೊಂದಿಗೆ ಚರ್ಚಿಸಿ ತೀರ್ಮಾನ | ತಾಲೂಕಿಗೊಂದು ಗೋಶಾಲೆ: ಚವ್ಹಾಣ್

20/1/21

ಕನ್ನಡಪ್ರಭ ವಾರ್ತೆ ಮಂಗಳೂರು/ ಉಡುಪಿ

ರಾಜ್ಯದಲ್ಲಿ ಈ ಹಿಂದೆ ಗೋ ಸಾಗಾಟ ತಡೆದ ಗೋರಕ್ಷಕ ಕಾರ್ಯಕರ್ತರ ಮೇಲೆ ದಾಖಲಾಗಿರುವ ಎಲ್ಲ ಪ್ರಕರಣಗಳನ್ನು ವಾಪಸ್ ಪಡೆಯುವ ಬಗ್ಗೆ ಚಿಂತನೆ ನಡೆಯುತ್ತಿದ್ದು ಈ ಬಗ್ಗೆ ಗೃಹ ಸಚಿವರೊಂದಿಗೆ ಮಾತುಕತೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಪಶು ಸಂಗೋಪನೆ ಸಚಿವ ಪ್ರಭು ಚವ್ಹಾಣ್ ತಿಳಿಸಿದ್ದಾರೆ. ಇದೇವೇಳೆ ಅಕ್ರಮ ಗೋ ಸಾಗಣೆ ತಡೆಯುವ ಕಾರ್ಯಕರ್ತರನ್ನು ಬಂಧಿಸದಂತೆ ಪೊಲೀಸರಿಗೆ ಸೂಚನೆ ನೀಡಿದ್ದಾರೆ.

ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಚವ್ಹಾಣ್ ಅವರು, ಗೋಹತ್ಯಾ ನಿಷೇಧ ಕಾಯ್ದೆ ಜಾರಿಯಾದ ಬಳಿಕ ಗೋಶಾಲೆಗಳಿಗೆ ಬರುವ ಗೋವುಗಳ ಸಂಖ್ಯೆ ಏರಿಕೆಯಾಗಲಿದೆ. ಆದ್ದರಿಂದ ರಾಜ್ಯದ ಗೋಶಾಲೆಗಳಿಗೆ ಹೆಚ್ಚುವರಿ ಅನುದಾನ ಒದಗಿಸಲು ಪ್ರಯತ್ನಿಸಲಾಗುವುದು. ಮುಂದಿನ ಬಜೆಟ್‌ನಲ್ಲಿ ಇದನ್ನು ಒಳಗೊಳಿಸಲು ಯೋಜಿಸಲಾಗಿದೆ ಎಂದರು.

ಜೊತೆಗೆ ಸರ್ಕಾರದ ವತಿಯಿಂದ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ತಾಲೂಕಿಗೊಂದು ಗೋಶಾಲೆ ಆರಂಭಿಸಬೇಕಾಗಿದೆ. ಇದರಿಂದ ಗೊಡ್ಡು ಹಸುಗಳಿಗೆ ಒಂದು ಆಸರೆ ದೊರೆಯುತ್ತದೆ ಎಂದು ಹೇಳಿದರು.

ರಾಜ್ಯದ ಮೊದಲ ಪಶುಚಿಕಿತ್ಸಾ ಆ್ಯಂಬುಲೆನ್ಸ್‌ಗೆ ಚಾಲನೆ

ಮಂಗಳೂರು: ರಾಜ್ಯದಲ್ಲೇ ಮೊದಲ ಬಾರಿಗೆ ಸುಸಜ್ಜಿತ ಸಂಚಾರಿ ಪಶುಚಿಕಿತ್ಸಾ ಆ್ಯಂಬುಲೆನ್ಸ್‌ಗೆ ಸಚಿವ ಪ್ರಭು ಚವ್ಹಾಣ್ ಮಂಗಳವಾರ ಮಂಗಳೂರಿನಲ್ಲಿ ಚಾಲನೆ ನೀಡಿದರು. ಇದರಲ್ಲಿ ಆಧುನಿಕ ಪಶುವೈದ್ಯ ಸೇವೆಗಳಾದ ಶಸ್ತ್ರಕ್ರಿಯಾ ಘಟಕ, ಪ್ರಯೋಗಶಾಲೆ, ಸ್ಕ್ಯಾನಿಂಗ್ ಉಪಕರಣ ಅಳವಡಿಕೆಗೆ ಅವಕಾಶವಿದೆ. ಇದಕ್ಕಾಗಿ ಪಶುಪಾಲಕರ ಸಹಾಯವಾಣಿ 1962 ವ್ಯವಸ್ಥೆ ಮಾಡಲಾಗಿದೆ. ಸದ್ಯ 15 ಜಿಲ್ಲೆಗಳಲ್ಲಿ ವ್ಯವಸ್ಥೆ ಇದ್ದು ಮುಂದೆ ರಾಜ್ಯಾದ್ಯಂತ ವಿಸ್ತರಿಸಲಾಗುವುದೆಂದರು.